ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ ಸಂಖ್ಯೆ:080-22343982

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ

ಬೆಂಗಳೂರು, ದಿನಾಂಕ:04.09.2018

ಸಂಖ್ಯೆ:ಕಾಶಿಇ/ಶೈವಿ/22/ಸುತ್ತೋಲೆ/2018-19

# ಸುತ್ತೋಲೆ

**ವಿಷಯ:** ಸೆಪ್ಟೆಂಬರ್ ೦೫-2018 ರಂದು ಶಿಕ್ಷಕರ ದಿನಾಚರಣೆಯನ್ನು ಆಚರಿಸುವ ಬಗ್ಗೆ

******

ಸೆಪ್ಟೆಂಬರ್ ೦೫ ರಂದು ಶಿಕ್ಷಕರ ದಿನಾಚರಣೆಯ ಅಂಗವಾಗಿ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಉಪಸ್ಥಿತಿಯಲ್ಲಿ ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಗೆ ಬರುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮತ್ತು ಉಪನ್ಯಾಸಕರುಗಳಿಗೆ ಜ್ಞಾನಜ್ಯೋತಿ ಸಭಾಂಗಣ, ಸೆಂಟ್ರಲ್ ಕಾಲೇಜು ಆವರಣ, ಅರಮನೆ ರಸ್ತೆ, ಬೆಂಗಳೂರು ಇಲ್ಲಿ ದಿನಾಂಕ:05.09.2018 ರಂದು ಬೆಳಗ್ಗೆ 9.00 ಗಂಟೆಗೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ತೀರ್ಮಾನಿಸಲಾಗಿದ್ದು. ಸದರಿ ಕಾರ್ಯಕ್ರಮಕ್ಕೆ ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು ಹಾಗೂ ಉಪನ್ಯಾಸಕರುಗಳು ಕಡ್ಡಾಯವಾಗಿ ಭಾಗವಹಿಸಲು ಸೂಚಿಸಲಾಗಿದೆ.

ದಿನಾಂಕ:೦5.09.2018 ರಂದು ಕಾಲೇಜಿನ ತರಗತಿಗಳನ್ನು ರದ್ದುಗೊಳಿಸುವ ಬಗ್ಗೆ ಪ್ರಾಂಶುಪಾಲರುಗಳು ತಮ್ಮ ಹಂತದಲ್ಲಿ ಕ್ರಮಕೈಗೊಳ್ಳುವುದು. ಬೆಂಗಳೂರು ಹೊರವಲಯದ ವ್ಯಾಪ್ತಿಯ ಕಾಲೇಜುಗಳಿಂದ ಸ್ವಇಚ್ಛೆಯಿಂದ ಹಾಜರಾಗುವ ಪ್ರಾಂಶುಪಾಲರು/ಪ್ರಾಧ್ಯಾಪಕರುಗಳಿಗೆ ಅನ್ಯಕಾರ್ಯ ನಿಮಿತ್ತ ರಜೆ ಮಂಜೂರು ಮಾಡಲಾಗಿದೆ. ಸದರಿ ಕಾರ್ಯಕ್ರಮಕ್ಕೆ ಹಾಜರಾದ ಎಲ್ಲಾ ಬೋಧಕವರ್ಗದವರು ಕಡ್ಡಾಯವಾಗಿ ಹಾಜರಾತಿ ಪ್ರಮಾಣ ಪತ್ರವನ್ನು ಪಡೆಯತಕ್ಕದು.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:** ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, - ಬೆಂಗಳೂರು ನಗರ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,ಬೆಂಗಳೂರು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯಾಡಳಿತಾಧಿಕಾರಿಗಳ, ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು
2. ಕಛೇರಿ ಪ್ರತಿ.